# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 18.03.2011**

ಮಾವಳ್ಳಿಪುರದ ಘನತ್ಯಾಜ್ಯ ವಿಲೇವಾರಿ ಘಟಕದಿಂದ ಸುತ್ತಮುತ್ತಲಿನ ಗ್ರಾಮದಲ್ಲಿ ಇರುವ ಕೊಳವೆ ಬಾವಿ ಮತ್ತು ಕೆರೆಗಳಲ್ಲಿನ ನೀರು ಮಾಲಿನ್ಯಗೊಂಡು ಸಾರ್ವಜನಿಕರ ಆರೋಗ್ಯದ ಮೇಲೆ ಪರಿಣಾಮ ಬೀರಿ ಜನರು ಅಸ್ವಸ್ಥಗೊಂಡಿರುತ್ತಾರೆ. ಈ ಬಗ್ಗೆ ಪಾಲಿಕೆಯಿಂದ ಕೂಡಲೇ ಮುಂಜಾಗ್ರತಾ ಕ್ರಮಗಳನ್ನು ಜರುಗಿಸಬೇಕೆಂದು ದಲಿತ ಸಂಘರ್ಷ ಸಮಿತಿಯ ಸದಸ್ಯರು ಮನವಿ ಮಾಡಿದ ಹಿನ್ನೆಲೆಯಲ್ಲಿ ಪಾಲಿಕೆ ಆಯುಕ್ತರು ದಿನಾಂಕ: 05.03.2011 ರಂದು ಮಾವಳ್ಳಿಪುರದ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ, ಸದರಿ ಘಟಕದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸಾರ್ವಜನಿಕರ ಆರೋಗ್ಯ ಕಾಪಾಡುವ ದೃಷ್ಟಿಯಿಂದ ಕೂಡಲೇ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಂಡು, ಈ ಗ್ರಾಮಗಳಲ್ಲಿ ಸೊಳ್ಳೆ ಮತ್ತು ನೊಣಗಳನ್ನು ನಿಯಂತ್ರಿಸಲು ಔಷಧಿ ಸಿಂಪಡಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ ಇಂದು ಉಪ ಆಯುಕ್ತರು (ಆರೋಗ್ಯ) ರವರು ಈ ಕೆಳಕಂಡ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿರುತ್ತಾರೆ.

- ಮಾವಳ್ಳಿಪುರ ಗ್ರಾಮದಲ್ಲಿ ಘನತ್ಯಾಜ್ಯ ವಸ್ತುಗಳ ಸಂಗ್ರಹಣಾ ವಿಲೇವಾರಿ ಘಟಕದ ಸುತ್ತಲು ಸುಮಾರು 15 ಗ್ರಾಮಗಳಲ್ಲಿ ನೊಣ ಮತ್ತು ಸೊಳ್ಳೆ ನಾಶಕ, ದುರ್ವಾಸನೆ ನಾಶ ಮಾಡುವ ರಾಸಾಯನಿಕಗಳನ್ನು ಸಿಂಪಡಿಸಲಾಗಿದೆ ಹಾಗೂ ಸದರಿ ಗ್ರಾಮದಲ್ಲಿ ಆರೋಗ್ಯ ತಪಾಸಣೆ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.
- ಮೊದಲನೇ ಹಂತದಲ್ಲಿ ಇಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ರಾಮಗೊಂಡನಹಳ್ಳಿ ಸರ್ಕಾರಿ ಶಾಲೆ ಆವರಣದಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿತ್ತು. ಈ ಶಿಬಿರದಲ್ಲಿ ಪಾಲಿಕೆಯ ಆರೋಗ್ಯ ಇಲಾಖೆಯ ತಜ್ಞ ವೈದ್ಯರುಗಳು, ಸರ್ಕಾರದ ನೆಫ್ರೋ ಯೂರಾಲಜಿ ಸಂಸ್ಥೆಯ ತಜ್ಞ ವೈದ್ಯರು, ಜಯದೇವ ಹೃದ್ರೋಗ ಸಂಸ್ಥೆಯ ತಜ್ಞ ವೈದ್ಯರು, ಯಲಹಂಕ ಸರ್ಕಾರಿ ಆಸ್ಪತ್ರೆಯಿಂದ ಮೂಳೆ ತಜ್ಞರು ಹಾಗೂ ಇತರೆ ಅರೆ ವೈದ್ಯಕೀಯ ಸಿಬ್ಬಂದಿ ವರ್ಗದವರು ಮತ್ತು ಶೇಖರ್ ನೇತ್ರಾಲಯದಿಂದ ನೇತ್ರ ತಜ್ಞರು ಈ ಶಿಬಿರದಲ್ಲಿ ಕಾರ್ಯನಿರ್ವಹಿಸಿದ್ದು, ರಾಮಗೊಂಡನಹಳ್ಳಿ ಮತ್ತು ಸುತ್ತಮುತ್ತಲ ಗ್ರಾಮಗಳಾದ ಕಂಪನಹಳ್ಳಿ, ವೀರಸಾಗರ, ಸುಬೇದಾರಪಾಳ್ಯ, ಐ.ಟಿ.ಆರ್.ಪಿ. ಕಾಲೋನಿ, ಮುಂತಾದ ಗ್ರಾಮಗಳಿಂದ ಸುಮಾರು 410 ಜನರು ಆರೋಗ್ಯ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು ಎಲ್ಲಾ ರೀತಿಯಲ್ಲೂ ಆರೋಗ್ಯ ತೊಂದರೆಗಳಿಗೆ ಚಿಕಿತ್ಸೆ ಪಡೆದಿರುತ್ತಾರೆ.
- ಇದೇ ರೀತಿ ದಿನಾಂಕ: 26.03.2011 ರಂದು ಮಾವಳ್ಳಿಪುರ ಸುತ್ತಮುತ್ತಲ ಗ್ರಾಮಗಳಲ್ಲಿ ಮತ್ತು ದಿನಾಂಕ: 02.04.2011 ರಂದು ಶಿವಕೋಟೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.
- ದಿನಾಂಕ: 05.03.2011 ರಿಂದಲೂ ಸದರಿ ಗ್ರಾಮಗಳಲ್ಲಿ ಬೀದಿ ನಾಯಿಗಳ ಸಂತಾನಹರಣ ಮತ್ತು ರೇಬಿಸ್ ನಿರೋಧಕ ಲಸಿಕೆಗಳನ್ನು ಹಾಕಲು ಕ್ರಮ ಜರುಗಿಸಲಾಗುತ್ತಿದೆ.

ಈ ಮೇಲಿನ ಎಲ್ಲಾ ಕ್ರಮಗಳನ್ನು ಕೈಗೊಂಡು, ಸದರಿ ಘಟಕದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸಾರ್ವಜನಿಕರ ಆರೋಗ್ಯ ಕಾಪಾಡಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಉಪ ಆಯುಕ್ತರು (ಆರೋಗ್ಯ) ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 18.03.2011**

ನಗರಾದ್ಯಂತ ಸ್ವಚ್ಛತೆ ಕಾಪಾಡುವ ಮತ್ತು ನಗರದ ಸೌಂದರ್ಯ ಹೆಚ್ಚಿಸುವ ದೃಷ್ಟಿಯಿಂದ ದಿನಾಂಕ 19ನೇ ಮಾರ್ಚ್ ಶನಿವಾರದಂದು ರಾತ್ರಿ 10.00 ಗಂಟೆಯಿಂದ ಬೆಳಗಿನ ಜಾವ 4.00 ಗಂಟೆಯವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ 60 ಉಪ ವಿಭಾಗಗಳಲ್ಲಿ ತೀವ್ರವಾದ ಸ್ವಚ್ಛತೆ ಕಾರ್ಯಾಚರಣೆ ಹಮ್ಮಿಕೊಳ್ಳಲಾಗುವುದು.

ಈ ಸ್ವಚ್ಛತಾ ಕಾರ್ಯಾಚರಣೆಯಲ್ಲಿ 163 ರಸ್ತೆಗಳನ್ನು ಆಯ್ಕೆ ಮಾಡಲಾಗಿದ್ದು, ಈ ರಸ್ತೆಗಳ ಉದ್ದ 111.5 ಕಿ.ಮೀ. ಆಗಿದೆ. ಇದರಲ್ಲಿ 4648 ಸಿಬ್ಬಂದಿ ವರ್ಗದವರು, 5 ಜೆ.ಸಿ.ಬಿ., 238 ಟ್ರಾಕ್ಟರ್‌ಗಳು ಮತ್ತು 51 ಲಾರಿಗಳನ್ನು ಬಳಸಿ, ರಸ್ತೆಬದಿ ಹಾಕಲಾದ ಮಣ್ಣು ಮತ್ತು ಕಲ್ಲಿನ ರಾಶಿ, ಪಾದಚಾರಿ ಮಾರ್ಗದ ಒತ್ತುವರಿ, ಸೊಳ್ಳೆ ಉತ್ಪತ್ತಿಯಾಗುವ ಸ್ಥಳಗಳಲ್ಲಿ ಔಷಧಿ ಸಿಂಪಡಿಸುವುದು, ಮರಗಳ ಒಣಗಿದ ಅಪಾಯಕಾರಿ ಟೊಂಗೆಗಳ ತೆರವು ಮುಂತಾದ ಕಾರ್ಯಗಳನ್ನು ನಿರ್ವಹಿಸಲಾಗುವುದೆಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**